## 10ನೆಯ ತರಗತಿ ಪ್ರಥಮ ಭಾಷೆ – ಕನ್ನಡ

# ಮಾದರಿ ಉತ್ತರ ಪತ್ರಿಕೆ

**I. ಪ್ರತಿಯೊಂದು ಹೇಳಿಕೆಯ ಕೆಳಗೆ ನಾಲ್ಕು ಉತ್ತರಗಳನ್ನು ನೀಡಲಾಗಿದೆ. ಅವುಗಳಲ್ಲಿ ಸರಿಯಾದ ಉತ್ತರವನ್ನು ಆರಿಸಿ ಉತ್ತರದ ಕ್ರಮಾಕ್ಷರದೊಂದಿಗೆ ಬರೆಯಿರಿ. 06X1=06**

೧. 'ವಾಗ್ದೇವಿ' ಪದವು ಈ ಸಂಧಿಗೆ ಉದಾಹರಣೆಯಾಗಿದೆ.
ಎ) ಜಶ್ತ್ವಸಂಧಿ ಬಿ) ಶ್ಚುತ್ವಸಂಧಿ
ಸಿ) ಯಣ್‌ಸಂಧಿ ಡಿ) ವೃದ್ಧಿಸಂಧಿ
ಉತ್ತರ : ಎ) ಜಶ್ತ್ವಸಂಧಿ

೨. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮಾನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.
ಎ) ವಿವರಣಾತ್ಮಕ ಚಿಹ್ನೆ ಬಿ) ವಾಕ್ಯವೇಷ್ಟನ ಚಿಹ್ನೆ
ಸಿ) ಉದ್ಧರಣ ಚಿಹ್ನೆ ಡಿ) ಆವರಣಚಿಹ್ನೆ
ಉತ್ತರ : ಆವರಣ ಚಿಹ್ನೆ

೩. ಚತುರ್ಥಿ ವಿಭಕ್ತಿಯ ಕಾರಕಾರ್ಥವಿದು.
ಎ) ಅಪಾದಾನ ಬಿ) ಸಂಪ್ರದಾಯ
ಸಿ) ಅಧಿಕರಣ ಡಿ) ಸಂಬಂಧ
ಉತ್ತರ :ಬಿ) ಸಂಪ್ರದಾನ

೪. ಇದು ಸಂಬಂಧಾರ್ಥಕಾವ್ಯಯಕ್ಕೆ ಉದಾಹರಣೆಯಾಗಿದೆ.
ಎ) ಅವನೇ ಬಿ) ಆಹಾ !
ಸಿ) ಆದ್ದರಿಂದ ಡಿ) ದಡದಡ
ಉತ್ತರ : ಸಿ) ಆದ್ದರಿಂದ

೫. ಕನ್ನಡ ವರ್ಣಮಾಲೆಯಲ್ಲಿ ಇಷ್ಟು ಅನುನಸಿಕಾಕ್ಷರಗಳಿವೆ.
ಎ) ಎರಡು ಬಿ) ಐದು
ಸಿ) ಆರು ಡಿ) ಏಳು
ಉತ್ತರ : ಬಿ) ಐದು

೬. ಇದು ಸಕರ್ಮಕ ಧಾತುವಾಗಿದೆ.
ಎ) ಮಲಗು ಬಿ) ಓಡು
ಸಿ) ಕೊಡು ಡಿ) ನೋಡು
ಉತ್ತರ : ಸಿ) ಕೊಡು

**II. ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಸಂಬಂಧ ಹೊಂದುವ ಪದವನ್ನು ಬರೆಯಿರಿ. 1X4=4**

೭. ನಲ್ಮೆ : ಪ್ರೀತಿ :: ಧೃತಿ : ಧೈರ್ಯ

೮. ಬನ್ನಿ ಬನ್ನಿ : ದ್ವಿರುಕ್ತಿ :: ಹಾಲ್ಜೇನು : <u>ಜೋಡುನುಡಿ</u>

೯. ವರ್ಣ : ಬಣ್ಣ :: ಬ್ರಹ್ಮ : <u>ಬೊಮ್ಮ</u>

೧೦. ನೋಡಲಿ : ವಿಧ್ಯರ್ಥಕ :: ಬರೆದಾನು : ಸಂಭವನಾರ್ಥಕ

## III. ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. 7X1=7

೧೧. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದನು?

**ಉತ್ತರ: ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಔಷಧಿ ಮತ್ತು ಶಸ್ತ್ರಚಿಕಿತ್ಸಾ ಸಾಮಾನುಗಳ ಪೆಟ್ಟಿಗೆಯನ್ನು ಭದ್ರವಾಗಿ ಹಿಡಿದುಕೊಂಡಿದ್ದನು.**

೧೨. ಮತಂಗಾಶ್ರಮಕ್ಕೆ ಹೋಗಲು ರಾಮಲಕ್ಷ್ಮಣರಿಗೆ ಸೂಚಿಸಿದವರು ಯಾರು?

**ಉತ್ತರ : ಮತಂಗಾಶ್ರಮಕ್ಕೆ ಹೋಗಲು ರಾಮಲಕ್ಷ್ಮಣರಿಗೆ ಸೂಚಿಸಿದವರು ಧನು.**

೧೩. ಆಂಗ್ಲ ಸಾಮ್ರಾಜ್ಯದ ವೈಭವ ಕಂಡು ಬರುವ ಓಣಿ ಯಾವುದು?

**ಉತ್ತರ : ಆಂಗ್ಲ ಸಾಮ್ರಾಜ್ಯದ ವೈಭವ ಕಂಡು ಬರುವ ಓಣಿ ಚೇರಿಂಗ್ ಕ್ರಾಸ್.**

೧೪. ಏಷ್ಯಾ ಖಂಡದಲ್ಲಿಯೇ ಮೊದಲ ಪ್ರಾರಂಭಸಿದ ಜಲ ವಿದ್ಯುತ್ ಯೋಜನೆ ಯಾವುದು?

ಉತ್ತರ : ಶಿವನ ಸಮುದ್ರದ ಬಳಿ ಕಾವೇರಿ ನದಿಗೆ ನಿರ್ಮಿಸಿದ ಜಲ ವಿದ್ಯುತ್ ಯೋಜನೆಯು ಏಷ್ಯಾ ಖಂಡದಲ್ಲಿಯೇ ಮೊದಲು ಪ್ರಾರಂಭಿಸಿದ ಯೋಜನೆಯಾಗಿದೆ.

೧೫. ಯಾವುದನ್ನು ಎಚ್ಚರದಲಿ ಮುನ್ನಡೆಸಬೇಕು?

ಉತ್ತರ : ಬಿರುಗಾಳಿಗೆ ಹೊಯ್ದಾಡುವ ಹಡಗನ್ನು ಎಚ್ಚರದಲಿ ಮುನ್ನಡೆಸಬೇಕು.

೧೬. ಹಲಗಲಿ ಗ್ರಾಮ ಎಲ್ಲಿದೆ?

ಉತ್ತರ: ಹಲಗಲಿ ಗ್ರಾಮ ಮುಧೋಳ ಸಂಸ್ಥಾನದಲಿದ್ದು, ಇಂದಿನ ಬಾಗಲಕೋಟೆ ಜಿಲ್ಲೆಗೆ ಸೇರಿದೆ.

೧೭. ವಿವೇಕಾನಂದರನ್ನು 'ಮಾನವತಾಮಿತ್ರ' ರೆಂದು ಕರೆದವರಾರು?

ಉತ್ತರ: ವಿವೇಕಾನಂದರನ್ನು 'ಮಾನವತಾಮಿತ್ರ' ರೆಂದು ಕರೆದವರು ಕುವೆಂಪು.

## IV. ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯದಲ್ಲಿ ಉತ್ತರ ಬರೆಯಿರಿ. 10x2 = 20

೧೮. ಡಾಕ್ಟರ್‌ಗೆ ವಿಮಾನದ ಪೈಲಟ್ ಏನು ಹೇಳಿದನು?

ಉತ್ತರ: ಡಾಕ್ಟರ್‌ಗೆ ವಿಮಾನದ ಪೈಲಟ್ "ಡಾಕ್ಟರ್! ರೇಡಿಯೋ ಸಮನಾಗಿ ಕಾರ್ಯನಿರ್ವಹಿಸುತ್ತಿಲ್ಲ. ಭೂಪ್ರದೇಶದೊಂದಿಗೆ ಸಂಪರ್ಕ ಬೆಳೆಸಲು ಸಾಧ್ಯವಾಗುತಿಲ್ಲ. ಎಲ್ಲಾದರೂ ಹೇಗಾದರೂ ಇಳಿಯೋಣ ಎಂದರೆ ಈ ಕತ್ತಲೆಯಲ್ಲಿ ಏನೂ ಕಾಣಿಸ್ತಾ ಇಲ್ಲವಲ್ಲ" ಎಂದು ಹೇಳಿದನು.

೧೯. ಲಕ್ಷ್ಮಣನು ಅಣ್ಣನನ್ನು ಹೇಗೆ ಸಂತೈಸಿದನು ತಿಳಿಸಿ.

ಉತ್ತರ: ಲಕ್ಷ್ಮಣನು "ತಾಳಿಕೋ ಅಣ್ಣ ತಾಳಿಕೋ ಸೂರ್ಯನೇ ಕಾಂತಿ ಕಳೆದುಕೊಂಡರೆ ಕಾಂತಿಯನ್ನು ನೀಡುವವರು ಯಾರು? ರಾಮನೇ ಧೈರ್ಯ ಕಳೆದುಕೊಂಡರೆ ಈ ಲೋಕಕ್ಕೆ ಸ್ಥೈರ್ಯ ನೀಡುವವರು ಯಾರು? ಎಂದು ಅಣ್ಣನನ್ನು ಸಂತೈಸಿದನು.

೨೦. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ?

ಉತ್ತರ: ಲಂಡನ್ನಿನ ಹೆಣ್ಣು ಮಕ್ಕಳು ಉಪಹಾರಗೃಹಗಳಲ್ಲಿ ಮಾಣಿಗಳಾಗಿ, ದೊಡ್ಡ ದೊಡ್ಡ ಅಂಗಡಿಗಳಲ್ಲಿ ಟೈಪಿಸ್ಟ್ ಆಗಿ, ಕಾರಕೂನರಾಗಿ (ಗುಮಾಸ್ತರು), ಹಾಗೂ ಸಿನಿಮಾ ಗೃಹಗಳಲ್ಲಿ ಪ್ರೇಕ್ಷಕರಿಗೆ ಜಾಗವನ್ನು ಹುಡುಕಿಕೊಡುವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ.

೨೧. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು?

ಉತ್ತರ: ನಾಲ್ವಡಿ ಕೃಷರ್ಣಾಜ ಒಡೆಯರು ಕಾಲದಲ್ಲಿ (೧) ಗ್ರಾಮ ನಿರ್ಮಲೀಕರಣ (೨) ವೈದ್ಯ ಸಹಾಯ (೩) ವಿದ್ಯಾ ಪ್ರಚಾರ (೪) ನೀರಿನಸೌಕರ್ಯ (೫) ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು.

೨೨.ಹಕ್ಕಿಯ ಹಾರಾಟವನ್ನು ಆಕಾಶಕ್ಕೆ ಹೇಗೆ ಹೋಲಿಸಿದ್ದಾರೆ?

ಉತ್ತರ: ಕಾಲವೆಂಬ ಹಕ್ಕಿಯು ಆಕಾಶ, ಮೋಡ, ಭೂಮಂಡಲಗಳ ಎಲ್ಲಾ ಬಣ್ಣಗಳನ್ನು ಸಮನಾಗಿ ಆವರಿಸಿಕೊಂಡಿದೆ. ಆಕಾಶದಲ್ಲಿರುವ ಮುಗಿಲಿಗೆ ರೆಕ್ಕೆಗಳೊಡದೆವೋ ಎಂಬಂತೆ, ಆಕಾಶದಲ್ಲಿ ಮಿನುಗುತ್ತಿರುವ ಚಿಕ್ಕೆಗಳ (ನಕ್ಷತ್ರ) ಮಾಲೆಯನ್ನು ಕೊರಳಿಗೆ ಸಿಕ್ಕಿಸಿಕೊಂಡು, ಆಕಾಶದಲ್ಲಿ ಬೆಳಗುತ್ತಿರುವ ಸೂರ್ಯಚಂದ್ರರನ್ನು ಕಣುಗ್ಣಳನ್ನಾಗಿ ಮಾಡಿಕೊಂಡು ಅನಂತದೆಡೆಗೆ ಹಾರಿಹೋಗುತ್ತಿದೆ ಎಂದು ಹಕ್ಕಿಯ ಹಾರಾಟವನ್ನು ಆಕಾಶಕ್ಕೆ ಹೋಲಿಸಿದ್ದಾರೆ.

೨೩.ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು?

ಉತ್ತರ: ಕ್ರಿ.ಶ. ೧೮೫೭ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ನಂತರ ಕುಂಪಣಿ ಸರಕಾರ ನಿಶ್ಶಸ್ತ್ರೀಕರಣ ಕಾಯ್ದೆಯಡಿ ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ ಎಂಬ ಆದೇಶ ಹೊರಡಿಸಿತು. ಈ ಆದೇಶದ ಪ್ರಕಾರ ಕುಂಪಣಿ ಸರ್ಕಾರದ ಅದಿಕಾರಿಗಳು ಹಲಗಲಿಗೆ ಬಂದು ಜೋರ ಮಾಡಿ ಬೇಡರ ಆಯುಧಗಳನ್ನು ಕಸಿದುಕೊಳ್ಳಲು ಹೋದರು. ಇದನ್ನು ವಿರೋದಿಸಿ ರಾಮ, ಬಾಲ, ಹನುಮ, ಜಡಗ ಮೊದಲಾದ ಹಲಗಲಿ ಬೇಡರು ತಮ್ಮಲ್ಲಿರುವ ಆಯುದಗಳನ್ನು ಕೊಡಲೊಪ್ಪದೆ ದಂಗೆ ಎದ್ದರು.

೨೪.ವಿವೇಕಾನಂದರು ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ಹೇಳಿದ್ದೇನು?

ಉತ್ತರ: ವಿವೇಕಾನಂದರು ಚಿಕಾಗೋ ಸರ್ವದರ್ಮ ಸಮ್ಮೇಳನದಲ್ಲಿ "ಸ್ವಮತಾಭಿಮಾನ, ಅನ್ಯ ಮತದ್ವೇಷ ಮತ್ತು ಇವುಗಳಿಂದ ಉತ್ಪನ್ನವಾದ ಘೋರ ದಾರ್ಮಿಕ ದುರಬಿಮಾನಗಳು ಈ ಸುಂದರ ಜಗತ್ತನ್ನು ಆವರಿಸಿಕೊಂಡಿವೆ...ಇಂತಹ ಉಗ್ರ ಧರ್ಮಾಂಧತೆಯ ದೈತ್ಯರಿಲ್ಲದೆ ಇದ್ದರೆ ಮಾನವ ಜನಾಂಗ ಇಂದಿಗಿಂತ ಎಷ್ಟೋ ಮುಂದುವರೆಯುತ್ತಿತ್ತು" ಎಂದು ಹೇಳಿದರು.

೨೫.ವಸಂತ ಮುಖ ತೋರಲಿಲ್ಲ ಪದ್ಯದಲ್ಲಿ ಪುಟ್ಟಿಯ ಪ್ರಶ್ನೆಗಳೇನು?

ಉತ್ತರ: ವಸಂತ ಮುಖ ತೋರಲಿಲ್ಲ ಪದ್ಯದಲಿ ಗುಡಿಸಲೊಳಗೆ ಬರಲು ವಸಂತ ಹೆದರಿದನೆ? ಹರಿದ ಚಿಂದಿ ಬಟ್ಟೆಗಳ ಕಂಡು ಅವನು ಮರುಗಿದನೆ? ಎಂಬವು ಪುಟ್ಟಿಯ ಪ್ರಶ್ನೆಗಳಾಗಿವೆ.

೨೬.ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರ ಅಭಿಪ್ರಾಯವೇನು?

ಉತ್ತರ: ಸ್ವಾಮಿ ವಿವೇಕಾನಂದರು "ಜಾತಿ ಎಂಬುದು ಸಮಾಜದ ಒಂದು ಆಂತರಿಕ ಭಾಗವಾಗಿದೆ. ಹಿಂದೆ ಅದು ವಿಕಾಸವಾಗುತ್ತಿತ್ತು. ಈಗ ಅದು ಘನೀಭೂತವಾಗಿದೆ. ಅದರ ದುರ್ಗಂಧದಿಂದ ಬಾರತದ ವಾತಾವರಣವೆಲ್ಲ ತುಂಬಿದೆ. ಶೂದ್ರರು, ಅಸ್ಪೃಶ್ಯರು ಜಾತಿ ವ್ಯವಸ್ಥೆಯ ಕ್ರೌರ್ಯಕ್ಕೆ ತುತ್ತಾಗಿದ್ದಾರೆ. ಇದರಿಂದ ಅವರು ಸ್ವಾತಂತ್ರ್ಯಹೀನರಾಗಿ ಗುಲಾಮತನ ಅನುಭವಿಸುತ್ತಿದ್ದಾರೆ" ಎಂದು ಜಾತಿ ವ್ಯವಸ್ಥೆಯ ಬಗ್ಗೆ ಅಬಿಪ್ರಾಯಪಟ್ಟಿದ್ದಾರೆ.

೨೭.ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ ಎಂದು ವಿಜಯಶ್ರೀ ಸಬರದ ಅವರು ತಿಳಿಸಿದ್ದಾರೆ?

ಉತ್ತರ : ಮನೆಯ ಒಳಗೆ ಸಂಭ್ರಮದಿಂದಿರುವ ಒಡೆಯನ ಮಕ್ಕಳ ಬಟ್ಟೆಯ ಮೇಲೆ ಬಣ್ಣ ಬಣ್ಣದ ಚಿಟ್ಟೆಗಳ ಚಿತ್ರಗಳು, ಚಿತ್ತಾರ ಬಿಡಿಸಿದ ನವಿಲು(ರೆಕ್ಕೆ ಬಿಚ್ಚಿ ಸ್ವಚ್ಛಂದದಿಂದ ಹಾಡುವ ನವಿಲು) ಚಿತ್ರಗಳು ಆದರೆ ಹೊರಗಿರುವ ಈ ಪುಟ್ಟ ಪೋರಿ, ಹಾಲುಗಲ್ಲದ ಹಸುಳೆ(ಚಿಕ್ಕಮಗು) ಮುಸುರೆ ತಿಕ್ಕುತ್ತಿದ್ದಾಳೆ.

V. ಕೆಳಗಿನ ಕವಿ / ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯ ರೂಪದಲ್ಲಿ ಬರೆಯಿರಿ. 2x3 = 06

೨೮. ಡಿ.ಎಸ್. ಜಯಪ್ಪಗೌಡ

ಡಿ.ಎಸ್. ಜಯಪ್ಪಗೌಡ ಇವರು ೧೯೪೭ ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ದಾರದಹಳ್ಳಿಯಲ್ಲಿ ಜನಿಸಿದರು. ದಾರದಹಳ್ಳಿ ಸುಬ್ಬೇಗೌಡ ಜಯಪ್ಪಗೌಡ ಎಂಬುದು ಇವರ ಪೂರ್ಣ ಹೆಸರು. ಕರ್ನಾಟಕ ಗ್ರಾಮೀಣ ಸಂಸ್ಥೆಗಳು, ಕರ್ನಾಟಕದ ಕಡಲಾಚೆ ಯ ಸಂಪರ್ಕಗಳು, ಮೈಸೂರು ಒಡೆಯರು. ಜನಪದ ಆಟಗಳು, ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು ಇವರ ಪ್ರಮುಖ ಕೃತಿಗಳು. ಕರ್ನಾಟಕದ ಕಡಲಾಚೆಯ ಸಂಪರ್ಕಗಳು ಕೃತಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಬಿಸಿದೆ. ದಾರವಾಡ ಕರ್ನಾಟಕ ಸಂಘದ ಸಂಶೋಧನಾ ಬಹುಮಾನಕ್ಕೆ ಭಾಜನರಾಗಿದ್ದಾರೆ.

೨೯. ದ. ರಾ ಬೇಂದ್ರೆ

ಉತ್ತರ : ಅಂಬಿಕಾತನಯದತ್ತ ಎಂಬ ಕಾವ್ಯನಾಮದಿಂದಪ್ರಸಿದ್ಧರಾಗಿರುವ ದತ್ತಾತ್ರೇಯ ರಾಮಚಂದ್ರ ಬೇಂದ್ರೆಯವರು ಕ್ರಿಶ ೧೮೯೬ರಲ್ಲಿ ಧಾರವಾಡದಲ್ಲಿ ಜನಿಸಿದರು. ನವೋದಯ ಕನ್ನಡ ಸಾಹಿತ್ಯದ ಪ್ರಮುಖ ಕವಿಗಳಲ್ಲಿಒಬ್ಬರಾದ ದ.ರಾ. ಬೇಂದ್ರೆ ಅವರು ಗರಿ, ಕೃಷ್ಣಕುಮಾರಿ, ಉಯ್ಯಾಲೆ, ಸಖೀಗೀತ, ನಾದಲೀಲೆ, ಮೇಘದೂತ, ಗಂಗಾವತರಣ, ಸೂರ್ಯಪಾನ, ನಗೆಯ ಹೊಗೆ, ಸಾಹಿತ್ಯದ ವಿರಾಟ್ ಸ್ವರೂಪ ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಇವರ ಅರಳು–ಮರಳು ಕವನ ಸಂಕಲನಕ್ಕೆ 'ಕೇಂದ್ರ ಸಾಹಿತ್ಯ ಅಕಾಡೆಮೆ ಪ್ರಶಸ್ತಿ', ನಾಕುತಂತಿ ಕವನ ಸಂಕಲನಕ್ಕೆ 'ಜ್ಞಾನಪೀಠಪ್ರಶಸ್ತಿ' ಲಭಿಸಿದೆ.

VI. ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣವಿಭಾಗ ಮಾಡಿ, ಛಂದಸ್ಸನ್ನು ಹೆಸರಿಸಿ ಲಕ್ಷಣ ಬರೆಯಿರಿ. 1x3=3

UUU - UUUUU -UU
೩೦. ನಿನಗೆ ಕಿಂಕರವೆರಡು ಸಂತತಿ

UUU - UU - U UU -
ಯೆನಿಸಲೊಲ್ಲದೆ ನೀನು ದುರಿಯೋ

UUU - - UUU - - UUU - - -
ಧನನ ಬಾಯ್ದಂಬುಲಕೆ ಕೈಯಾನುವರೆ ಹೇಳೆಂದ

ಛಂದಸ್ಸು – ಭಾಮಿನಿ ಷಟ್ಪದಿ ಲಕ್ಷಣ:

ಒಂದು ಮತ್ತು ಎರಡನೇ ಪಾದಗಳು ಸಮಾನವಾಗಿದ್ದು ಪ್ರತಿಪಾದದಲ್ಲೂ ಮೂರು ಮಾತ್ರೆಯ ಮುಂದೆ ನಾಲ್ಕು ಮಾತ್ರೆಗಳು. ಬರುವ ಹಾಗೆ (೩ । ೪ । ೩ । ೪) ತಲಾ ಎರಡೆರಡು ಗಣಗಳು ಬಂದಿವೆ. ೨. ಮೂರನೇ ಪಾದದಲ್ಲಿ ಮೂರು ಮಾತ್ರೆಗಳ ಮುಂದೆ ನಾಲ್ಕು ಮಾತ್ರೆಗಳು ಬರುವ ಹಾಗೆ (೩ । ೪ । ೩ । ೪ । ೩ । ೪)

VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ.1x3= 3

೩೧. ಒಳಗಿನ ಮಂದಿ ಗುಂಡು ಹೊಡಿದರೊ ಮುಂಗಾರಿ ಸಿಡಿಲ ಸಿಡಿದ್ಹಾಂಗ

ಅಲಂಕಾರ :- ಉಪಮಾಲಂಕಾರ

ಉಪಮೇಯ :- ಒಳಗಿನ ಮಂದಿ ಗುಂಡು ಹೊಡೆಯುವುದು

ಉಪಮಾನ :- ಮುಂಗಾರಿನ ಸಿಡಿಲು ಸಿಡಿಯುವುದು

ಉಪಮಾ ವಾಚಕ :- ಹಾಂಗ

ಸಮಾನಧರ್ಮ :- ಸಿಡಿಯುವುದು

ಸಮನ್ವಯ :- ಇಲ್ಲಿ ಉಪಮೇಯವಾದ ಒಳಗಿನ ಮಂದಿ ಗುಂಡು ಹೊಡೆಯುವುದನ್ನು ಉಪಮಾನವಾದ ಮುಂಗಾರಿನ ಸಿಡಿಲು ಸಿಡಿಯುವುದಕ್ಕೆ ಪರಸ್ಪರ ಹೋಲಿಸಿ ವರ್ಣಿಸಲಾಗಿದೆ.

ಲಕ್ಷಣ :- ಎರಡು ವಸ್ತುಗಳಿಗಿರುವ ಸಾದೃಶ್ಯಸಂಪತ್ತನ್ನು ಹೋಲಿಸಿ ವರ್ಣಿಸಿದರೆ ಅದು ಉಪಮಾಲಂಕಾರ.

VII. ಕೆಳಗಿನಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1x3=3

೩೨. ತಾಳಿದವನು ಬಾಳಿಯಾನು.

ಉತ್ತರ : ಗಾದೆ ವೇದಗಳಿಗೆ ಸಮಾನ, ಗಾದೆ ಹಿರಿಯರು ಮತ್ತು ಜನಪದರ ಜೀವನದ ಅನುಭವದ ನುಡಿಮುತ್ತುಗಳು. ಗಾದೆಗಳು ಆಕಾರದಲ್ಲಿ ವಾಮನನಾದರೂ ಅರ್ಥದಲ್ಲಿ ತ್ರಿವಿಕ್ರಮನಂತೆ. ತಾಳಿದವನು ಬಾಳಿಯಾನು ಎಂಬ ಈ ಮೇಲಿನ ಗಾದೆಯು ಪ್ರಸಿದ್ಧವಾಗಿದೆ. ತಾಳುವಿಕೆಗಿಂತ ಬೇರೊಂದು ತಪಸ್ಸು ಇಲ್ಲ, ತಾಳ್ಮೆಯೇ ನಿಜವಾದ ತಪಸ್ಸು. ತಲ್ಲಣಿಸದಿರು ಕಂಡ್ಯ ತಾಳು ಮನವೆ ಎಂದಿದ್ದಾರೆ ಕನಕದಾಸರು. ಶಬರಿ ತಾಳ್ಮೆಯಿಂದ ಸಾಕಷ್ಟು ವರ್ಷಗಳು ಕಾದಿದದ್ದಕ್ಕೆ ಶ್ರೀರಾಮನ ದರ್ಶನದಿಂದ ಮುಕ್ತಿ ದೊರೆಯಿತು. ತಾಳ್ಮೆಯಿಂದ ಯೋಚಿಸಿದ ಧರ್ಮಬುದ್ಧಿ ಸತ್ಯವನ್ನು ತೋರಿಸಿದನು. ಆದ್ದರಿಂದ ತಾಳ್ಮೆ ಬಹಳ ಮುಖ್ಯವಾದ ವಸ್ತು ಇದ್ದ ಹಾಗೆ. ಗಿಡ ನೆಟ್ಟ ಕೂಡಲೇ ಮರವಾಗಿ ಫಲ ಬಿಡಬೇಕು ಎಂದರೆ ಸಾಧ್ಯವಿಲ್ಲ. ಸಂಗೀತಾಭ್ಯಾಸ ಮಾಡಿದರೆ ಒಂದೇ ತಿಂಗಳಿನಲ್ಲಿ ಕಛೇರಿ ನೀಡುವಂತಾಗಬೇಕು ಎನ್ನುವುದು ಸಾಧ್ಯವಿಲ್ಲ. ಪ್ರತಿಯೊಂದು ಸಾಧನೆಯಲ್ಲೂ ತಾಳ್ಮೆ ಬೇಕು. ತಾಳ್ಮೆ ಎಂದರೆ ಆಮೆಗತಿಯಲ್ಲಿ ಸಾಗುವುದು ಎಂದರ್ಥವಲ್ಲ ಯಾವ ಸಾಧನೆಗೆ ಎಷ್ಟು ಸಮಯ ಮತ್ತು ಪ್ರಯತ್ನಗಳು ಬೇಕೋ ಅವನ್ನು ಪೂರ್ಣತೆಯಿಂದ ಮಾಡಲು ಬೇಕಾಗುವ ಶಕ್ತಿಯೇ ತಾಳ್ಮೆ; ತಾಳ್ಮೆಯಿಂದ ಕಟ್ಟಿದ್ದು ಮತ್ತು ಪಡೆದಿದ್ದು ದೀರ್ಘಕಾಲ ಬಾಳುತ್ತದೆ. ತಾಳ್ಮೆಗೆಟ್ಟು ಕೋಪದ ಕೈಯಲ್ಲಿ ನಮ್ಮ ಮನಸ್ಸನ್ನು ನೀಡಿದರೆ ಅನಾಹುತವಾಗುವುದರಲ್ಲಿ ಸಂದೇಹವಿಲ್ಲ. ತಾಳ್ಮೆಯಿಂದ ಯೋಚಿಸಿದಾಗ ಒಳ್ಳೆಯ ಕಾರ್ಯಗಳು ಫಲಪ್ರದವಾಗುತ್ತವೆ. ಮಾಡಬೇಕಾದ ಕಾರ್ಯಗಳಿಗೆ ಯೋಜನೆಗಳು ಹೊಳೆಯುತ್ತವೆ. ಆದ್ದರಿಂದ ತಾಳ್ಮೆ ಪ್ರತಿಯೊಬ್ಬರಲ್ಲಿ ಇರಬೇಕಾದ ಅತ್ಯಮೂಲ್ಯವಾದ ಸಂಪತ್ತು ಎಂದೇ ಭಾವಿಸಿಕೊಂಡು ತಾಳ್ಮೆಯಿಂದ ಬಾಳಬೇಕು ಎಂದು ಹೇಳಬಹುದು.

VIII. ಈ ಕೆಳಗಿನ ವಾಕ್ಯ ಅಥವಾ ಹೇಳಿಕೆಗಳನ್ನು ಸಂದರ್ಭ ಸಹಿತ ಸ್ವಾರಸ್ಯ ಬರೆಯಿರಿ. 6x3=18

೩೩. "ನಾನಾಕೆಯನ್ನು ಪರೀಕ್ಷಿಸುವೆ, ನೀವು ಬಿಸಿ ನೀರು ಸಿದ್ಧಪಡಿಸಿ."

**ಆಯ್ಕೆ:** ಪ್ರಸ್ತುತ ಈ ವಾಕ್ಯವನ್ನು **ಸಾ ರಾ ಅಬೂಬಕ್ಕರ್** ಅವರು ರಚಿಸಿರುವ **'ಚಪ್ಪಲಿಗಳು'** ಕಥಾಸಂಕಲನದಿಂದ ಆಯ್ದ **'ಯುದ್ಧ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.
**ಸಂದರ್ಭ**:ಮುದುಕಿಯ ಮನೆಯ ಒಳಗಡೆಗೆ ಹೋದ ರಾಹಿಲನಿಗೆ ಮುದುಕಿಯ ಸೊಸೆ ಹೆರಿಗೆ ನೋವಿನಿಂದ ಬಳಲುತ್ತಿರುವುದು ತಿಳಿಯುತ್ತದೆ.ಮುದುಕಿಯಿಂದ ವಿಷಯ ತಿಳಿದ,ಕೋಣೆಗೆ ಹೋಗುತ್ತಾನೆ.ತಾನೊಬ್ಬ ಡಾಕ್ಟರ್ ಆಗಿರುವುದರಿಂದ ಕೂಡಲೇ ನಾನಾಕೆಯನ್ನು ಪರೀಕ್ಷಿಸುವೆ ಎಂದು ಹೇಳಿದ ಸಂದರ್ಭದಲ್ಲಿ ಈ ಮಾತು ಬಂದಿದೆ.
**ಸ್ವಾರಸ್ಯ**:ರಾಹಿಲನು ಗಾಯಗೊಂಡು ನೋವಿನಲ್ಲಿ ಇದ್ದರು,ಅದನ್ನು ಲೆಕ್ಕಿಸದೆ ಗರ್ಭಿಣಿಯೊಬ್ಬಳ ನೋವಿಗೆ ಸ್ಪಂದಿಸುವ ರಾಹಿಲನ ಪರೋಪಕಾರ ಗುಣ,ವೃತ್ತಿಧರ್ಮ ಮಾನವೀಯ ಗುಣ ಸ್ವಾರಸ್ಯಕರವಾಗಿದೆ.

೩೪."ರೂಪಿನಂತೆ ಮಾತು ಕೂಡ ಎನಿತುದಾರವಾಗಿದೆ !"

ಆಯ್ಕೆ:– ಈ ವಾಕ್ಯವನ್ನು ಪು. ತಿ. ನರಸಿಂಹಾಚಾರ್ ಅವರು ರಚಿಸಿರುವ 'ಶಬರಿ' ಗೀತನಾಟಕದಿಂದ ಆಯ್ದ 'ಶಬರಿ' ಎಂಬ ಪಾಠದಿಂದ ಆರಿಸಲಾಗಿದೆ.
ಸಂದರ್ಭ:– ಈ ಮಾತನ್ನು ಶಬರಿಯು ರಾಮನಿಗೆ ಹೇಳುತ್ತಾಳೆ. ಶಬರಿಯ ಆತಿಥ್ಯ ಸ್ವೀಕರಿಸಿದ ರಾಮನು "ನಮ್ಮ ಅಯೋಧ್ಯೆಯ ಅರಮನೆಯಲ್ಲೂ ಕೂಡ ಇದಕ್ಕಿಂತ ಹಿತವಾದದ್ದು ಇಲ್ಲ. ಇಂದು ನಾವು ಕಾಡು ಎಂಬುದನ್ನು ಮರೆತು ಮನೆಯೆಂದೇ ತಿಳಿದೆವು. ಇಷ್ಟೊಂದು ಪ್ರೀತಿ ತೋರುವ ನಿನ್ನನ್ನು ತಾಯಿ ಎಂದೇ ತಿಳಿದೆವು" ಎಂದು ಶಬರಿಗೆ ಹೇಳಿದಾಗ ಶಬರಿ, "ನಿನ್ನ ರೂಪಿನಂತೆ ಮಾತು ಕೂಡ ಎನಿತುದಾರವಾಗಿದೆ!". ನಾನು ಇಂದು ಧನ್ಯಳಾಗಿದ್ದೇನೆ ಎಂದು ರಾಮನಿಗೆ ಹೇಳಿದ ಸಂದರ್ಭವಾಗಿದೆ.
ಸ್ವಾರಸ್ಯ:– "ರಾಮ ನಿನ್ನ ರೂಪದಂತೆ ಮಾತು ಕೂಡ ಎಷ್ಟೊಂದು ಧಾರಾಳವಾಗಿದೆ" ಎಂದು ಹೇಳುವ ಮೂಲಕ ಶಬರಿಯು ರಾಮನ ವ್ಯಕ್ತಿತ್ವವನ್ನು ಬಹು ಸ್ವಾರಸ್ಯಪೂರ್ಣವಾಗಿ ವರ್ಣಿಸಿದ್ದಾಳೆ.

**೩೫. " ನಿಮ್ಮ ದೇಶದ ಗೌರವನ್ನು ಕಾಯಿರಿ! ಇದು ದೊಡ್ಡದಾದ ರಾಷ್ಟ್ರ "**

**ಆಯ್ಕೆ :** ಪ್ರಸ್ತುತ ಹೇಳಿಕೆಯನ್ನು **ವಿ.ಕೃ. ಗೋಕಾಕ್** ರು ಬರೆದ **'ಸಮುದ್ರದಾಚೆಯಿಂದ'** ಎಂಬ ಪ್ರವಾಸಕಥನದಿಂದ ಆಯ್ದ **'ಲಂಡನ್ ನಗರ'** ಎಂಬ ಗದ್ಯಭಾಗದಿಂದ ಆರಿಸಲಾಗಿದೆ.
**ಸಂದರ್ಭ** : ಲಂಡನ್ ಮೂಲೆಮೂಲೆಯಲ್ಲಿ, ಬೀದಿಬೀದಿಗಳಲ್ಲಿ ಪ್ರಸಿದ್ಧ ಕವಿಗಳು, ರಾಜಕಾರಣಿಗಳು, ರಾಜರುಗಳು, ಇತಿಹಾಸ ಪ್ರಸಿದ್ಧರ ಶಿಲಾಮೂರ್ತಿಗಳನ್ನು ಕೈಯೆತ್ತಿ ನಿಂತಿರುವಂತೆ ನಿಲ್ಲಿಸಿದ್ದಾರೆ. ಇದನ್ನು ನೋಡಿದ ಸಂದರ್ಭದಲ್ಲಿ ಲೇಖಕರು ಈ ಮಾತನ್ನ ಹೇಳಿದ್ದಾರೆ.
**ಸ್ವಾರಸ್ಯ** : ಬ್ರಿಟನ್ ದೇಶವು ಶ್ರೇಷ್ಠವಾದ ರಾಷ್ಟ್ರ, ದೊಡ್ಡದಾದ ದೇಶ. ಈ ದೇಶದ ಪ್ರಸಿದ್ಧಿಯು ಮುಂದಿನ ಪೀಳಿಗೆಯವರಿಗೆ ಉಳಿಯಬೇಕು,ಕಾಪಾಡಬೇಕು ಎಂಬ ದೇಶಾಭಿಮಾನವು ಇಲ್ಲಿಯ ಸ್ವಾರಸ್ಯವಾಗಿದೆ.

೩೬. **"ಹೊಸ ಭರವಸೆಗಳ ಕಟ್ಟೋಣ"**

ಆಯ್ಕೆ:ಪ್ರಸ್ತತ ಈ ವಾಕ್ಯವನ್ನು ರಾಷ್ಟ್ರಕವಿ ಜಿ .ಎಸ್.ಶಿವರುದ್ರಪ್ಪನವರು ರಚಿಸಿದ 'ಎದೆ ತುಂಬಿ ಹಾಡಿದೆನು' ಎಂಬ ಕವನ ಸಂಕಲನದಿಂದ ಆಯ್ದ 'ಸಂಕಲ್ಪಗೀತೆ' ಎಂಬ ಪದ್ಯಪಾಠದಿಂದ ಆರಿಸಲಾಗಿದೆ.
ಸಂದರ್ಭ:ಜೀವನದಲ್ಲಿ ಧನಾತ್ಮಕ ಭಾವನೆಯನ್ನು ಹೊಂದಿರಬೇಕು ಯಾವುದೇ ರೀತಿಯ ಸವಾಲುಗಳು ಎದುರಾಗಲು ಆತ್ಮವಿಶ್ವಾಸ ಕಳೆದುಕೊಳ್ಳಬಾರದು.ಕ್ರಿಯಾಶೀಲರಾಗಿ ದುಡಿದಾಗ ಯಶಸ್ಸು ಲಭಿಸುತ್ತದೆ.ಜೀವನದಲ್ಲಿ ಬೇರೆಬೇರೆ ಕಾರಣಗಳಿಂದಾಗಿ ಸೋಲಬಹುದು.ಮುಗ್ಗರಿಸಿ ಬೀಳಬಹುದು ಅದಕ್ಕಾಗಿ ಧೃತಿಗೆಟ್ಟು ಕುಳಿತುಕೊಳ್ಳದೆ ಆತ್ಮವಿಶ್ವಾಸದಿಂದ,ವೈಚಾರಿಕತೆಯಿಂದ ಭರವಸೆಗಳನ್ನು ಕಟ್ಟಿಕೊಳ್ಳುತ್ತಾ ಮೇಲೆದ್ದು ನಿಲ್ಲಬೇಕು ಎಂದು ಹೇಳುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳುತ್ತಾರೆ.
ಸ್ವಾರಸ್ಯ:ಸತತ ಪ್ರಯತ್ನ ಧೃತಿಗೆಡದ ಆತ್ಮವಿಶ್ವಾಸ,ಪರಿಶ್ರಮದ ಮೂಲಕ,ಹೊಸ ಭರವಸೆಗಳ ಜೀವನವನ್ನು ಸ್ವಸ್ಥಗೊಳಿಸಿಕೊಳ್ಳಬೇಕೆಂಬುದನ್ನು ಪ್ರಸ್ತುತ ಹೇಳಿಕೆ ಸ್ವಾರಸ್ಯಪೂರ್ಣವಾಗಿ ನಿರೂಪಿಸುತ್ತದೆ.

೩೭. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ"

ಆಯ್ಕೆ :–ಈ ವಾಕ್ಯವನ್ನು ಡಾ. ಬಿ. ಎಸ್. ಗದ್ದಗಿಮಠ ಅವರು ಸಂಪಾದಿಸಿರುವ 'ಕನ್ನಡ ಜನಪದ ಗೀತೆಗಳು' ಕೃತಿಯಿಂದ ಆಯ್ದು ನೀಡಿರುವ 'ಹಲಗಲಿ ಬೇಡರು' ಎಂಬ ಪದ್ಯದಿಂದ ಆರಿಸಲಾಗಿದೆ.

ಸಂದರ್ಭ:– ಕುಂಪಣಿ ಸರ್ಕಾರ ಹೊರಡಿಸಿದ್ದ ನಿಶ್ಯಸ್ತ್ರೀಕರಣದ ಆದೇಶವನ್ನು ವಿರೋದಿಸಿ ತಮ್ಮಲಿರ್ಲುವ ಆಯುದಗಳನ್ನು ಕೊಡಲು ಒಪ್ಪದೆ ದಂಗೆ ಎದ್ದ ಹಲಗಲಿಯ ಬೇಡರನ್ನು ಬಗ್ಗುಬಡಿಯಲು ಬ್ರಿಟಿಷ್‌ರ ' ದಂಡು ಹಲಗಲಿಗೆ ಬಂದಿತು. ಬ್ರಿಟಿಷ್ ದಂಡಿನ ಸಿಪಾಯಿಗಳು ಹಲಗಲಿಯ ಬೇಡರನ್ನು ಬೆನ್ನು ಬೆನ್ನು ಹತ್ತಿ ತಿರುತಿರವಿ ಹಾಕಿ ಕೊಂದರು. ಬೇಡರನ್ನು ದಂಡಿನ ಮಧ್ಯೆ ಹಾಕಿಕೊಂಡು ಕರುಣೆ ಇಲದ್ಲೆ ಹಾಗೆ ಗುಂಡು ಹೊಡೆದು ಸಾಯಿಸಿದರು ಎಂದು ಲಾವಣಿಕಾರ ಹೇಳಿದ ಸಂದರ್ಭವಾಗಿದೆ.

ಸ್ವಾರಸ್ಯ:– ಹಲಗಲಿಯ ಬೇಡರ ಮೇಲೆ ಗುಂಡು ಹಾರಿಸಿ ಕೊಲ್ಲುವ ಬ್ರಿಟಿಷ್ ಸೈನಿಕರ ನಿಷ್ಕಕರುಣಾ ಭಾವ ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿತವಾಗಿದೆ.

೩೮. "ನಿನ್ನಪದೆಸೆಯ ಬಯಸುವನಲ್ಲ"

ಆಯ್ಕೆ:– ಈ ವಾಕ್ಯವನ್ನು ಕುಮಾರವ್ಯಾಸ ವಿರಚಿತ 'ಕರ್ಣಾಟ ಭಾರತ ಕಥಾಮಂಜರಿ' ಎಂಬ ಕೃತಿಯಿಂದ ಆಯ್ದ 'ಕೌರವೇಂದ್ರನ ಕೊಂದೆ ನೀನು' ಎಂಬ ಪದ್ಯದಿಂದ ಆರಿಸಿಕೊಳ್ಳಲಾಗಿದೆ.

ಸಂದರ್ಭ:– ಈ ವಾಕ್ಯವನ್ನು ಕೃಷ್ನನು ಕರ್ಣನಿಗೆ ಹೇಳಿದನು. ಕರ್ಣನು ತನ್ನ ಜನ್ಮರಹಸ್ಯವನ್ನು ತಿಳಿದು ಮನಸ್ಸು ದ್ವಂದ್ವದಲ್ಲಿ ಸಿಲುಕಿ ಚಿಂತಾಕ್ರಾಂತನಾಗಿ ಮೌನವಾದಾಗ ಕೃಷ್ಣನು "ಏನು ಹೇಳು ಕರ್ಣ ಮನದಲ್ಲಿರುವ ತಲ್ಲಣ ಯಾವುದು? ಕುಂತಿಯ ಮಕ್ಕಳಿಂದ ಸೇವೆ ಮಾಡಿಸಿಕೊಳ್ಳವುದು ಇಷ್ಟವಿಲ್ಲವೇ? ಎನ್ನಾಣೆಗೂ ನಿನಗೆ ಯಾವುದೇ ನಷ್ಟವಿಲ್ಲ. ಮಾತನಾಡು ಮೌನವೇತಕೆ, ಭ್ರಮೆಗೊಳಗಾಗುವುದು ಬೇಡ. ನಾನು ನಿನಗೆ ಕೇಡನ್ನು ಬಯಸುವುದಿಲ್ಲ" ಎಂದು ಕೇಳಿದ ಸಂದರ್ಭವಾಗಿದೆ.

ಸ್ವಾರಸ್ಯ:– "ಕರ್ಣ ನಾನು ನಿನಗೆ ಕೇಡಾಗಲೆಂದು ಬಯಸುವುದಿಲ್ಲ ನಿನಗೆ ಒಳ್ಳೆಯದನ್ನೆ ಬಯಸುವೆ" ಎಂದು ಕೃಷ್ಣ ಹೇಳುವ ಹಿತಚಿಂತನೆಯ ಮಾತು ಸ್ವಾರಸ್ಯಪೂರ್ಣವಾಗಿದೆ.

IX. ಕೊಟ್ಟಿರುವ ಪದ್ಯ ಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. 1x4=4

ಕಲುಷಿತವಾದೀ ನದೀ ಜಲಗಳಿಗೆ
ಮುಂಗಾರಿನ ಮಳೆಯಾಗೋಣ
ಬರಡಾಗಿರವೀ ಕಾಡು ಮೇಡುಗಳ
ವಸಂತವಾಗುತ ಮುಟ್ಟೋಣ.

ಅಥವಾ

ಮತಗಳೆಲ್ಲವೂ ಪಥಗಳು ಎನ್ನುವ
ಹೊಸ ಎಚ್ಚರದೊಳು ಬದುಕೋಣ
ಭಯ ಸಂಶಯದೊಳು ಕಂದಿದ ಕಣ್ಣೊಳು
ನಾಳಿನ ಕನಸನು ಬಿತ್ತೋಣ.

X. ಈ ಕೆಳಗಿನ ಪದ್ಯಭಾಗದಲ್ಲಿ ಅಡಕವಾಗಿರುವ ಮೌಲ್ಯಗಳನ್ನಾಧರಿಸಿ ಸಾರಾಂಶ ಬರೆಯಿರಿ.1x4=4

೩೯. ಬೇಂದ್ರೆಯವರು ಈ ಪದ್ಯದಲ್ಲಿ ಶುಕ್ರ, ಚಂದ್ರ, ಮಂಗಳಲೋಕ ಸಂಚಾರ ಕಾಲದ ಭೌತಿಕ ಲಕ್ಷಣವನ್ನು ವೈಜ್ಞಾನಿಕವಾಗಿ ಚಿತ್ರಿಸಿದ್ದಾರೆ. ಇನ್ನೊಂದು ಕಡೆ ಬ್ರಿಟೀಷರ ಸಾಮ್ರಾಜ್ಯಶಾಹಿ ನೀತಿಯಿಂದ ಪಾರಾಗುವ ಸ್ವಾತಂತ್ರ್ಯ ಚಿಂತನದ ಕಲ್ಪನಾ ಪಕ್ಷಿಯ ಹಾರಾಟ ಇನ್ನೊಂದು ಲಕ್ಷಣ. ಬೆಳ್ಳಿಚುಕ್ಕಿ ಎಂದು ಕರೆಯಲ್ಪಡುವ ಶುಕ್ರಗ್ರಹವನ್ನು ಹಳ್ಳಿಗೆ ಹೋಲಿಸಿ, ಕಾಲದ ಹಕ್ಕಿ ಆ ಹಳ್ಳಿಯ (ಶುಕ್ರಗ್ರಹದ) ಮೇರೆಯನ್ನು ದಾಟಿ ಹಾರಿಹೋಗುತ್ತಿದೆ. ತಿಂಗಳೂರು ಅಂದರೆ ಚಂದ್ರಲೋಕ. ಈ ಚರದ್ರಲೋಕಕ್ಕೆ ಹಕ್ಕಿ(ಇಲ್ಲಿ ಭೌತಿಕವಾಗಿ ಮಾನವ ರೂಪದ ಕಾಲ) ಏರಿ ನೀರಿನ ಸೆಲೆಯನ್ನು ಹುಡುಕಿ ಅದನ್ನು ಹೀರುತ್ತ ಸಂತೋಷವಾಗಿ ಆಡುತ್ತಿದೆ. ಹಾಗೆಯೇ ಮುಂದೆ ಹಾರಾಡುತ್ತ ಹಾರಾಡುತ್ತ ಮಂಗಳ ಲೋಕ(ಗ್ರಹ)ದ 'ಅಂಗಳಕ್ಕೆ ಏರಿ ಹೋಗುತ್ತಿದೆ. ಹೀಗೆ ವೈಜ್ಞಾನಿಕ ರೆಕ್ಕೆಗಳನ್ನು ಹೊಂದಿದ ಹಕ್ಕಿ ಹಾರುತಿದೆ ನೋಡಿದಿರಾ ಎಂದು ಹಾಡಿದ್ದಾರೆ. ವೈಜ್ಞಾನಿಕವಾಗಿ ಭಾರತೀಯರು ಚಂದ್ರ,ಶುಕ್ರ, ಮಂಗಳನ ಅಂಗಳಕ್ಕೆ ಹೋಗಿ ಸಂಶೋಧನೆ ಮಾಡುವ ಗುರಿಯನ್ನು,ದಾರ್ಶನಿಕ ಶಕ್ತಿಯನ್ನು ಪರೋಕ್ಷವಾಗಿ ಅಬಿವ್ಯಕ್ತಪಡಿಸಿದ್ದಾರೆ.

## XI. ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2 x 4= 8

**೪೦. ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.**

**ಅಥವಾ**

**ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.**

ಉತ್ತರ : ನಾಲ್ವಡಿ ಕೃಷ್ಣರಾಜ ಒಡೆಯರು ೧೯೦೨ ಆರಸ್ಟ್ ೮ ರಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿಯನ್ನು ತಮ್ಮ ಸುಪರ್ದಿಗೆ ತೆಗೆದುಕೊಂಡು, ದಿವಾನರಾಗಿದ್ದ ಸರ್. ಕೆ ಶೇಷಾದ್ರಿಯವರ ಸಹಕಾರದಿಂದ ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾದರು. ಅರಸು ಮನೆತನದಿಂದ ಬಂದವರಾದರೂ, ಜನತೆ ಆಡಳಿತದಲ್ಲಿ ಪಾಲ್ಗೊಳ್ಳುವುದು ಪರವಾಗಿದ್ದರು. 'ಪ್ರಜಾಪ್ರತಿನಿಧಿ ಸಭೆ' ಹೊಸರೂಪ ಪಡೆಯಿತು. ೧೯೨೩ ರಲ್ಲಿ ಕಾನೂನೊಂದನ್ನು ಜಾರಿಗೆ ತಂದು 'ಪ್ರಜಾಪ್ರತಿನಿಧಿ ಸಭೆ'ಯನ್ನು ಶಾಸನಬದ್ಧ ಸಂಸ್ಥೆಯನ್ನಾಗಿಸಿದರು. ವರ್ಷಕ್ಕೆ ಎರಡು ಬಾರಿ ಸಮಾವೇಶಗೊಂಡು ಕಲಾಪ ನಡೆಸಿ, ವಾರ್ಷಿಕ ಆಯವ್ಯಯ, ಪರಿಶೀಲನೆ, ಪ್ರಶ್ನೋತ್ತರ, ಠರಾವು ಮಂಡಿಸಲಾಗುತ್ತಿತ್ತು. ಹೆಚ್ಚಿನ ಸದಸ್ಯರು ಜನರಿಂದಲೇ ಆಯ್ಕೆಯಾಗುತ್ತಿದ್ದರು. ೧೯೦೭ ರಲ್ಲಿ 'ನ್ಯಾಯ ವಿಧಾಯಕ ಸಭೆ' ಸ್ಥಾಪಿಸಿದರು.ಇದು ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿತ್ತು. ಬೆಂಗಳೂರಿನಲ್ಲಿ ಎರಡು ಬಾರಿ ಸಮಾವೇಶಗೊಂಡು ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲಾವನ್ನು ವಿಮರ್ಶಿಸುವ, ಕಾನೂನುನ್ನು ಜಾರಿಗೆ ತರುವ ಅಧಿಕಾರ ಇದ್ದಿತು. ಗ್ರಾಮ ನಿರ್ಮಲೀಕರಣ, ವೈದ್ಯೆ ಸಹಾಯ,ವಿದ್ಯಾ ಪ್ರಚಾರ, ನೀರಿನ ಸೌಕರ್ಯ, ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು. ಶಿವನಸಮುದ್ರದ ಬಳಿ ಕಾವೇರಿ ನದಿಯಿಂದ ಜಲವಿದ್ಯುತ್ ಉತ್ಪಾದನಾ ಕೇಂದ್ರ, ವಾಣಿವಿಲಾಸ ಸಾಗರ, ಕೃಷ್ಣಸಾಗರ ಜಲಾಶಯಗಳನ್ನು ನಿರ್ಮಿಸಿದರು. ಉಚಿತ ಪ್ರಾಥಮಿಕ, ಮಾಧ್ಯಮಿಕ ಶಿಕ್ಷಣ ಜಾರಿಗೆ ತಂದರು. ಮೈಸೂರು ವಿಶ್ವವಿದ್ಯಾನಿಲಯ, ಉಚಿತ ಅಸ್ಪತ್ರೆ, ಮೈಸೂರು ಬ್ಯಾಂಕ್,( ಈಗ ಎಸ್.ಬಿ ಐ) ಸಹಕಾರ ಸಂಘಗಳನ್ನು ಸ್ಥಾಪಿಸಿದರು. ಹಲವಾರು ಸಾಮಾಜಿಕ ಕಾನೂನುಗಳನ್ನು ಜಾರಿಗೆ ತಂದರು. ಭರತಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮಾಡಿ ಮೈಸೂರು ಸಂಸ್ಥಾನವನ್ನು 'ಮಾದರಿ ಮೈಸೂರು ರಾಜ್ಯ'ವನ್ನಾಗಿ ರೂಪಿಸಿ ಸಾಮಾಜಿಕ ಕಾನೂನುಗಳ ಹರಿಕಾರ ಎಂಬ ಕೀರ್ತಿಗೆ ಪಾತ್ರರಾದರು.

ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ ಎಂಬುದನ್ನು ಅರಿತು "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗ್ತದೆ

ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂದು ಹೇಳಿದ್ದಾರೆ. ಅದಕ್ಕಾಗಿ ಅವರು ಶಿಕ್ಷಣದ ವಿವಿಧ ಯೋಜನೆಗಳನ್ನು ರೂಪಿಸಿದರು. ೧೯೧೩ ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಪ್ರೌಢಶಿಕ್ಷಣ ಶಾಲೆಗಳು ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದವು. ಇದನ್ನು ಬದಲಿಸಿ ಮೈಸೂರು ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನಯೆನ್ನು ಆರ್ಥಿಕ ಪರಿಷತ್ತಿನ ಮೂಲಕ ರೂಪುಗೊಳಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ ಇವರ ಕಾಲದಲ್ಲಾಯಿತು. ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದರು. ಇದಕ್ಕಾಗಿಯೇ ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಕನ್ನಡ ಬಾಷೆ ಮತ್ತು ಸಾಹಿತ್ಯಗಳ ಬಗ್ಗೆ ಸಾರ್ವಜನಿಕರಲ್ಲಿ ಉಂಟಾಗಿದ್ದ ಆಸಕ್ತಿಯನ್ನು ಮನಗಂಡು'ಕನ್ನಡ ಸಾಹಿತ್ಯ ಪರಿಷತ್ತನ್ನು' ಸ್ಥಾಪಿಸಿದ್ದು ಇವರ ಕಾಲದ ಮತ್ತೊಂದು ಮಹತ್ವದ ಸಾಧನೆಯಾಗಿದೆ.

**೪೧. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು?**

**ಅಥವಾ**

ಕರ್ಣನ ನಿರ್ಧಾರ ಸರಿ ಎನ್ನುವಿರಾ? ಏಕೆ?

ಉತ್ತರ : ಜೀವನದಲ್ಲಿ ಪರಸ್ಪರ ಹೊಂದಾಣಿಕೆ ಮತ್ತು ಸಾಮರಸ್ಯದ ಬದುಕು ಅತ್ಯಗತ್ಯ. ಛಲ, ಮತ್ಸರ ಪ್ರಧಾನವಾದರೆ ಸಂಘರ್ಷ ಅನಿವಾರ್ಯವಾಗುತ್ತದೆ. ಶತ್ರುವಿನೊಡನೆ ಸಮರಕ್ಕಿಳಿದು ಕಾದಾಡುವ ಮುನ್ನ ಶತ್ರುಬಲದ ವಿವಿಧ ಆಯಾಮಗಳನ್ನು ಶಮನಗೊಳಿಸಿದಾಗ ಗೆಲುವು ಸಾಧ್ಯ ಎಂಬುದು ರಾಜತಂತ್ರ. ಕೌರವರೊಂದಿಗೆ ಸಂಧಿ ಮುರಿದು ಬಿದ್ದು ಯುದ್ಧವೇ ಸಿದ್ಧ ಎಂದು ತೀರ್ಮಾನವಾದಾಗ ಕೃಷ್ಣನು ಕರ್ಣನನ್ನು ಕರೆದು ಮೈದುನತನದ ಸರಸವನ್ನು ಎಸಗಿ ತನ್ನ ರಥದಲ್ಲಿ ತೊಡೆಗೆ ತೊಡೆತಾಗುವಂತೆ ಕೂರಿಸಿಕೊಂಡು ಕರ್ಣನ ಜನ್ಮದ ರಹಸ್ಯವನ್ನು ಹೇಳುತ್ತಾನೆ. ನಿಮ್ಮಲ್ಲಿ ಯಾದವರು,ಕೌರವರು ಎಂಬ ಭೇದವಿಲ್ಲ. ಈ ಭೂಮಿಗೆ ನಿಜವಾಗಿ ನೀನೇ ಒಡೆಯನಾಗಬೇಕು. ಕುಂತಿ ಪಡೆದ ಐದು ಮಂತ್ರಗಳಲ್ಲಿ ನೀನೆ ಮೊದಲಿಗ,ಎರಡನೆಯವನು ಯುಧಿಷ್ಠಿರ, ಮೂರನೆಯವನು ಕಲಿಭೀಮ, ನಾಲ್ಕನೆಯವನು ಅರ್ಜುನ, ಕೊನೆಯ ಐದನೆಯ ಮಂತ್ರದಲ್ಲಿ ಮಾದ್ರಿಗೆ ನಕುಲ–ಸಹದೇವರು ಜನಿಸಿದರು. ನಿನ್ನನ್ನು ಹಸ್ತಿನಾಪುರ ರಾಜನನ್ನಾಗಿ ಮಾಡುತ್ತೇನೆ. ಕೌರವರು, ಪಾಂಡವರು ನಿನ್ನ ಸೇವಕರಾಗಿರುತ್ತಾರೆ. ಇದನ್ನು ಬಿಟ್ಟು ದುರ್ಯೋಧನನ ಎಂಜಲಿಗೆ ಕೈಚಾಚುವುದು ಸರಿಯೇ? ಎಡಭಾಗದಲ್ಲಿ ಕೌರವರು, ಬಲಭಾಗದಲ್ಲಿ ಪಾಂಡವರು, ನಡುವಿನಲ್ಲಿ ಮಾದ್ರರು, ಮಾಗಧರು, ಯಾದವರು ಇರುತ್ತಾರೆ. ಇವರ ನಡುವೆ ರಾಜನಾಗಿ ವಿಜೃಂಭಿಸುವುದನ್ನು ಬಿಟ್ಟು ದುರ್ಯೋಧನ ಕರೆದಾಗ ಸೇವಕನಂತೆ 'ಸ್ವಾಮಿ ನಿಮ್ಮ ಪ್ರಸಾದ' ಎನ್ನುವುದು ಕಷ್ಟವಾಗುವುದಿಲ್ಲವೆ? ಆದ್ದರಿಂದ ಪಾಂಡವರ ಪಕ್ಷವನ್ನು ಸೇರುವಂತೆ ಕೃಷ್ಣನು ಆಮಿಷಗಳನ್ನು ಒಡ್ಡುತ್ತಾನೆ.

ಉತ್ತರ: ಕರ್ಣನ ನಿರ್ಧಾರ ಸರಿ ಇದೆ ಏಕೆಂದರೆ ಕೃಷ್ಣನು ಕರ್ಣನ ಜನ್ಮರಹಸ್ಯವನ್ನು ತಿಳಿಸಿ, ರಾಜಪದವಿಯ ಆಮೀಷವನ್ನು ಒಡ್ಡಿದರೂ ಸ್ವಾಮಿನಿಷ್ಠೆಗೆ ಶೌರ್ಯಕ್ಕೆ, ದಾನಕ್ಕೆ, ಉದಾತ್ತತೆಗೆ, ಕರುಣೆಗೆ ಹೆಸರಾಗಿದ್ದ ಕರ್ಣ ಕೃಷ್ಣನ ಪ್ರಲೋಭನೆಗೆ ಒಳಗಾಗಲಿಲ್ಲ. ಅಸಹಾಯಕನಾದ ಸ್ಥಿತಿಯಲ್ಲಿ ನೋವು, ಸಂಕಟಗಳನ್ನು ತನ್ನಲ್ಲಿ ನುಂಗಿಕೊಂಡಿದ್ದಾನೆ. ಕೃಷನ್ನ ಪ್ರಲೋಭನೆ ವ್ಯರ್ಥಗೊಳ್ಳುವಂತೆ ಮಾಡಿ ಸ್ವಾಮಿನಿಷ್ಠೆಯನ್ನು ಮರೆದನು. ಕರ್ಣನು ರಾಜ್ಯದ ಸಿರಿಗೆ ಸೋಲಲಿಲ್ಲ, ಸಾಕಿದ ಒಡೆಯನಿಗೆ ದ್ರೋಹ ಮಾಡಲಿಲ್ಲ. ಒಂದು ಕಡೆ ಸ್ವಾಮಿನಿಷ್ಠೆಯನ್ನು ಬಿಡಲಿಲ್ಲ. ಇನ್ನೊಂದು ಕಡೆ ಸಹೋದರರ ಮೇಲಿನ ವಾತ್ಸಲ್ಯವನ್ನು ಮರೆಯಲಿಲ್ಲ. "ವೀರ ಕೌರವರಾಯನೇ ನನಗೆ ಒಡೆಯ, ಆತನ ವೈರಿಗಳು ನನಗೂ ವೈರಿಗಳೇ, ಆತನ ಹೊಗಳಿಯೇ ನನ್ನ ಹೊಗಳಿಕೆ ದುರ್ಯೋಧನ ಆದಂತೆ ಆಗುವೆನು, ನಾಳಿನ ಸಮರದಲ್ಲಿ ಪಾಂಡುವಿನ ಪುತ್ರರಲಿ ನನ್ನ ಭುಜಬಳದ 'ಪರಾಕ್ರಮವನ್ನು, ಅದರ ಶ್ರೇಷ್ಠತೆಯನ್ನು ತೋರಿಸುತ್ತೇನೆ" ಎಂಬ ಮಾತು ಕರ್ಣನ ಸ್ವಾಮಿ ನಿಷ್ಠೆ ಮತ್ತು ಶೌರ್ಯಗಳನ್ನು ಪ್ರತಿಬಿಂಬಿಸುತ್ತವೆ. "ಚತುರಂಗ ಬಲದಿಂದ ಕೂಡಿದ ನಾಳಿನ ಮಹಾಭಾರತ ಯುದ್ಧದಲ್ಲಿ ಮೃತ್ಯುದೇವತೆಗೆ ಬೋಜನ ಕೂಟವಾಗುವಂತೆ ಮಾಡುತ್ತೇನೆ. ಯುದ್ಧರಂಗದಲ್ಲಿ ಅಸಂಖ್ಯಾ ವೀರಯೋಧರನ್ನು ಕೊಂದು ಕೌರವನ

ಋಣ ತೀರುವಂತೆ ಮಾಡುತ್ತೇನೆ. ಒಡೆಯನ ಅಗತ್ಯದ ಸಮಯಕ್ಕೆ ಆಗುವಂತೆ ನನ್ನ ಶರೀರವನ್ನು ತೆಜಿಸುತ್ತೇನೆ. ಸೂರ್ಯನ ಮೇಲಾಣೆ ನಿನ್ನ ಆ ವೀರರೌವರನು ನೋಯಿಸುವುದಿಲ್ಲ" ಎಂಬ ಮಾತುಗಳು ಕರ್ಣನ ತ್ಯಾಗ ಮತ್ತು ಕರುಣಾ ಗುಣಗಳಿಗೆ ಹಿಡಿದ ಕನ್ನಡಿಯಾಗಿವೆ. ಆದ್ದರಿಂದ ಯುದ್ಧದ ವಿಚಾರದಲ್ಲಿ ಕರ್ಣ ತೆಗೆದುಕೊಂಡ ನಿರ್ಧಾರ ಸರಿಯಾಗಿದೆ ಎಂದು ಹೇಳಬಹುದು

೪೨.ಪ್ರಾಚ್ಯ ಸ್ಮಾರಕಗಳ ಸಂರಕ್ಷಣೆ

ಪೀಠಿಕೆ : ಪ್ರಾಚೀನ ಸ್ಮಾರಕಗಳು ರಾಷ್ಟ್ರ ಪರಂಪರೆಯ ಹೆಗ್ಗುರುತುಗಳು. ನಮ್ಮ ಭವ್ಯ ಪರಂಪರೆಯ ಪ್ರತೀಕಗಳಾಗಿವೆ. ಗತಕಾಲದ ವೈಭವಗಳನ್ನು ಅರಿಯಲು ಆದಾರವಾಗಿರುವಂತಹ ಅಮೂಲ್ಯವಾದ ಸಂಪತ್ತು ಎಂದೇ ಹೇಳಬಹುದು.

ವಿಷಯ ನಿರೂಪಣೆ : ಪ್ರಾಚ್ಯ ಎಂದರೆ ಪ್ರಾಚೀನವಾದದ್ದು ಎಂದರ್ಥ. ಪ್ರಾಚೀನ ಕಾಲದಲ್ಲಿ ನಮ್ಮ ಹಿರಿಯರು ವಿಜಯದ ನೆನಪಿಗಾಗಿ ವಿಜಯ ಸ್ಮಾರಕಗಳು, ಅಥವಾ ಇನ್ನಾವುದಾದರೂ ಸ್ಮರಣೆಗೋಸ್ಕರ ದೇವಾಲಯಗಳು, ಸ್ತಂಭಗಳು, ಶಾಸನಗಳು, ಬಸದಿಗಳು, ಮಸೀದಿಗಳು, ಮಹಲ್ಗಳು, ಮೂರ್ತಿಗಳು, ಅರಮನೆಗಳು, ಕೋಟೆಕೊತ್ತಲುಗಳನ್ನು ನಿರ್ಮಿಸಿದ್ದಾರೆ. ಇವೇ ನಮ್ಮ ಪ್ರಾಚ್ಯ ಸ್ಮಾರಕಗಳು. ಅವುಗಳನ್ನು ಸಂರಕ್ಷಣೆ ಮಾಡಿಕೊಂಡು ಹೋಗುವುದು ನಮ್ಮ ಹೆಗ್ಗಳಿಗೆ. ಯಾಕೆಂದರೆ ನಮ್ಮ ಪ್ರಾಚೀನರ ಜೀವನ ವ್ಯವಸ್ಥೆಗಳನ್ನು, ಇತಿಹಾಸ ಪರಂಪರೆಯನ್ನು ಅರಿಯಲು ಮೂಲಭೂತವಾದ ಆಕರವಾಗಿರುವಂತವು. ಭಾರತೀಯರು ಕಲೆ-ವಾಸ್ತುಶಿಲ್ಪಗಳಿಗೆ ಹೆಸರುವಾಸಿಯಾಗಿರುವಂತವರು. ಪ್ರಾಚೀನ ಭಾರತೀಯರು ಕಠಿಣ ಶ್ರಮವಹಿಸಿ ಬಾ ರತದ ಪ್ರಾಚೀನ ವಾಸ್ತುಶಿಲ್ಪಗಳನ್ನು ನಿರ್ಮಿಸಿದರು. ಆದರೆ ವಿದೇಶಿಯರು ಒಂದು ಕ್ಷಣಮಾತ್ರದಲ್ಲಿ ವಾಸ್ತುಶಿಲ್ಪಗಳನ್ನು ಕೆಡವಿ ಹಾಕಿದರು. ಮತ್ತೆ ಹಾಗಾಗಬಾರದು. ನಮ್ಮ ಗತಕಾಲದ ಜೀವನದ ಮೇಲೆ ಮುಂದಿನ ಜೀವನ ನಿಂತಿರುತ್ತದೆ. ಪ್ರಾಚೀನ ಸ್ಮಾರಕಗಳ ಆಧಾರದ ಮೇಲೆ ಅಂದಿನ ಜನರ ವೈಭವದ ಜೀವನ, ರಾಜಕೀಯ, ಸಾಂಸ್ಕೃತಿಕ, ಐತಿಹಾಸಿಕ ಅಂಶಗಳನ್ನು ತಿಳಿಯಬಹುದು.ಆದ್ದರಿಂದ ಅವುಗಳನ್ನು ರಕ್ಷಿಸಬೇಕು. ಕನ್ನಡ ನಾಡಿನಲ್ಲಿ ಹಂಪೆ, ಬಾದಾಮಿ, ಐಹೊಳೆ, ಪಟ್ಟದಕಲ್ಲು, ತಲಕಾಡು, ಶ್ರವಣಬೆಳಗೊಳ, ಮೈಸೂರು,ಬೀದರ್,ಬಿಜಾಪುರ ಮುಂತಾದ ಕಡೆ ಪ್ರಾಚ್ಯ ಸ್ಮಾರಕಗಳನ್ನು ನೋಡಿದಾಗ ಅಂದಿನ ರಾಜ-ಮಹಾರಾಜರ ಇತಿಹಾಸ ಮತ್ತು ಕಲೆ,ಸಂಸ್ಕೃತಿಯನ್ನು ತಿಳಿಯಬಹುದು.

ಉಪಸಂಹಾರ : ಬಾರತೀಯರ ಸಂಸ್ಕೃತಿಯ ದ್ಯೂತಕವಾಗಿರುವ ,ಐತಿಹಾಸಿಕ ಮಹತ್ವವನ್ನು ತಿಳಿಸುವ ಪ್ರಾಚೀನ ಕಾಲದ ಸ್ಮಾರಕಗಳನ್ನು ಸಂರಕ್ಷಿಸಿಕೊಂಡು ಹೋಗಬೇಕಾದದ್ದು ನಮ್ಮ ನಿಮ್ಮೆಲ್ಲರ ಜವಬ್ದಾರಿಯಾಗಿದೆ.

೪೩. ನಿಮ್ಮನ್ನು ಹನುಮಂತನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ನಳಿನಾ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆಯುವ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಿ ಮಂಡ್ಯದಲ್ಲಿರುವ ಚಂದ್ರಶೇಖರ್ ಎಂಬ ನಿಮ್ಮಚಿಕ್ಕಪ್ಪ ಅವರಿಗೆ ಪತ್ರ ಬರೆಯಿರಿ.

ಕ್ಷೇಮ ಶ್ರೀ

ನಳಿನಾ

ಹನುಮಂತನಗರ

ದಿನಾಂಕ;೧೨/೦೨/೨೦೧೯

ತೀರ್ಥರೂಪ ಸಮಾನರಾದ ಚಿಕ್ಕಪ್ಪನವರಿಗರ ನಿಮ್ಮ ಮಗನು ಮಾಡುವ ಸಾಷ್ಟಾಂಗ ನಮಸ್ಕಾರಗಳು. ಇಲ್ಲಿ ನಾನು ಆರೋಗ್ಯವಾಗಿದ್ದೇನೆ. ಅಲ್ಲಿ ನಿಮ್ಮ ಮತ್ತು ಮನೆಯವರ ಆರೋಗ್ಯ ಹೇಗಿದೆ? ಯಾವುದಕ್ಕೂ ಪತ್ರ ಬರೆಯಿರಿ. ಇಲ್ಲಿ ನಾನು ಚೆನ್ನಾಗಿ ವಿದ್ಯಾಭ್ಯಾಸ ಮಾಡುತ್ತಿದ್ದೇನೆ. ನಿಮ್ಮ ಅಪೇಕ್ಷೆಯಂತೆ ಪ್ರಥಮ ಸ್ಥಾನದಲ್ಲಿ ಉತ್ತೀರ್ಣನಾಗಲು ಪ್ರಯತ್ನಿಸುತ್ತಿದ್ದೇನೆ. ಪತ್ರದ ಮುಖ್ಯ ವಿಚಾರವೇನೆಂದರೆ, ನಮ್ಮ ಶಾಲೆಯಲ್ಲಿ ನಡೆಯುವ ವಿಜ್ಞಾನ ವಸ್ತು ಪ್ರದರ್ಶನಕ್ಕೆ ತಪ್ಪದೇ ಬರಬೇಕೆಂದು ತಮ್ಮಲ್ಲಿ ಕೇಳಿಕೊಳ್ಳುತ್ತೇನೆ. ಮನೆಯವರಿಗೆಲ್ಲ ನನ್ನ ನಮಸ್ಕಾರಗಳನ್ನು ತಿಳಿಸಿ. ಉಳಿದ ವಿಷಯವನ್ನು ಊರಿಗೆ ಬಂದಾಗ ಮಾತನಾಡುತ್ತೇನೆ.

ನಮಸ್ಕಾರಗಳೊಂದಿಗೆ,

ನಿಮ್ಮ ಪ್ರೀತಿಯ ಮಗಳು

ನಳಿನಾ

ಇವರಿಗೆ,

ಶ್ರೀ ಚಂದ್ರಶೇಖರ್

ಮನೆ ಸಂಖ್ಯೆ ೫೪,

೧ನೆಯ ಮುಖ್ಯರಸ್ತೆ,

ಕುವೆಂಪುನಗರ

ಮಂಡ್ಯ – ೫೭೩ ೨೦೫